ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1084 (1396)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಸಹಕಾರ ಸಚಿವರು

ವಿಷಯ : ರೈತರಿಂದ ನೇರವಾಗಿ ಭತ್ತ, ರಾಗಿ ಖರೀದಿ ಮಾಡಲಾಗುತ್ತಿರುವ ಬಗ್ಗೆ

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ರೈತರಿಂದ ನೇರವಾಗಿ ಭತ್ತ, ರಾಗಿ ಖರೀದಿ ಮಾಡಲು ಎಷ್ಟು ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನಾಗಮಂಗಲ ತಾಲ್ಲೂಕು ಎ.ಪಿ.ಎಂ.ಸಿ. ಆವರಣದಲ್ಲಿ ರಾಗಿ ಖರೀದಿ ಕೇಂದ್ರದಲ್ಲಿ ಅಧಿಕಾರಿಗಳು ರೈತರಿಗೆ ಸರಿಯಾಗಿ ಸ್ಪಂದಿಸುತ್ತಿಲ್ಲ ಹಾಗೂ ರಾಗಿ ಖರೀದಿ ಕೇಂದ್ರಕ್ಕೆ ಬರುವ ರೈತರಿಗೆ ಮೂಲಭೂತ ಸೌಲಭ್ಯ (ಕುಡಿಯುವ ನೀರು ಮತ್ತು ಶೌಚಾಲಯ) ಕಲ್ಪಿಸಿಲ್ಲವೆಂದು ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವ್ಯವಸ್ಥೆ ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ನಾಗಮಂಗಲ ರಾಗಿ ಖರೀದಿ ಕೇಂದ್ರದಲ್ಲಿ ಎ.ಪಿ.ಎಂ.ಸಿ.ಯ ತೂಕದ ಯಂತ್ರ ಕೆಟ್ಟಿದ್ದು ಇದರಿಂದ ಖರೀದಿ ಕೇಂದ್ರಕ್ಕೆ ಬಂದ ರೈತರಿಗೆ ಆಗಿರುವ ಅನಾನುಕೂಲ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಈ) ನಾಗಮಂಗಲ ತಾಲ್ಲೂಕು ಎ.ಪಿ.ಎಂ.ಸಿ. ಆವರಣದಲ್ಲಿ ಹೊಸದಾಗಿ ನಿರ್ಮಿಸಿರುವ ಶೌಚಾಲಯ, ತೂಕದ ಯಂತ್ರ, ಕುಡಿಯುವ ನೀರಿನ ವ್ಯವಸ್ಥೆ ಈ ಸಂಬಂಧ ಕಳಪೆ ಕಾಮಗಾರಿ ಮಾಡಿರುವ ಗುತ್ತಿಗೆದಾರರು ಮತ್ತು ಅಧಿಕಾರಿ ವರ್ಗದವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)